RW-1 ಪವನ್ ಕುಮಾರ್

Date:19.05.2025

**<u>ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆ 2 ನೇ ಎದುರುದಾರರ ಪರ ಶ್ರೀ ಬಿ ಜೆ ಎಂ ವಕೀಲರಿಂದಃ</u>**

ಈ ದಿನ ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸುತ್ತಿದ್ದು ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು ನಾನೇ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ಸಾಕ್ಷಿಗೆ ನೀಡಿದ ಅಧಿಕಾರ ಪತ್ರವನ್ನು ಅದನ್ನು ನಿಆರ್ 1 ಎಂದು ಗುರುತಿಸಲಾಯಿತು. ವಿಮಾಪಾಲಿಸಿಯ ದೃಡಿಕರಿಸಿದ ಪ್ರತಿಯನ್ನು ನಿಆರ್ 2 ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲುಃ ಅರ್ಜಿದಾರರ ಪರ ಶ್ರೀ ಜೆ ಡಿ ವಕೀಲರಿಂದಃ</u>**

ಅಪಘಾತದ ಬಗ್ಗೆ ನನಗೆ ವೈಯಕ್ತಿಕ ಮಾಹಿತಿ ಇರುವುದಿಲ್ಲ ಎಂದರೆ ಸರಿ. ನಾನು ದಾಖಲಾತಿಗಳ ಆಧಾರದ ಮೇಲೆ ನನ್ನ ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸರಿ. ಪೊಲೀಸರು ತನಿಖೆಯನ್ನು ಕೈಗೊಂಡು ಲಾರಿ ಚಾಲಕನ ವಿರುದ್ಧ ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿದ್ದಾರೆ ಸಾಕ್ಷಿ ಅದನ್ನು ತಪ್ಪಾಗಿ ಸಲ್ಲಿಸಿದ್ದಾರೆ ಎಂದು ನುಡಿದಿರುತ್ತಾರೆ. ಪೊಲೀಸರು ತಪ್ಪಾಗಿ ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿದ್ದಾರೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಇದೇ ಅಪಘಾತಕ್ಕೆ ಸಂಬಂದಪಟ್ಟಂತೆ ಜಿ ರಾಮು ರವರು ಮೃತಪಟ್ಟಿದ್ದರು ಮತ್ತು ಅವರ ಕುಟುಂಬದ ಸದಸ್ಯರು ಸಲ್ಲಿಸಿದ ಅರ್ಜಿಯಲ್ಲಿ ನಮ್ಮ ವಿರುದ್ಧ ನ್ಯಾಯಾಲಯ ತೀರ್ಪು ನೀಡಿದ ಮೇರೆಗೆ ನಾವು ಪರಿಹಾರದ ಹಣವನ್ನು ಪಾವತಿಸಿದ್ದೇವೆ ಎಂದರೆ ನನಗೆ ಮಾಹಿತಿ ಇಲ್ಲ. ಅರ್ಜಿದಾರರಿಗೆ ಪರಿಹಾರದ ಹಣವನ್ನು ಕೊಡುವು ಬಾಧ್ಯಸ್ತಿಕೆಯಿಂದ ತಪ್ಪಿಸಿಕೊಳ್ಳಲು ನಾನು ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**1 ನೇ ಎದುರುದಾರರ ಪರ ವಕೀಲರು ಗೈರು ಹಾಜರಿರುವ ಕಾರಣ ಪಾಟೀ ಸವಾಲು ಅವರ ಪರ ಇಲ್ಲ ಎಂದು ಪರಿಗಣಿಸಲಾಯಿತು.**

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು). ಓ.ಹೇ.ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು

ಜೆ.ಎಂ.ಎಫ್.ಸಿ., ಚಳ್ಳಕೆರೆ